# ಕರ್ನಾಟಕ ವಿಧಾನ ಪರಿಷತ್ತು

01. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 199 (280)

02. ಮಾನ್ಯ ವಿಧಾನ ಪರಿಷತ್ ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು)

03. ಉತ್ತರಿಸುವ ದಿನಾಂಕ : 06.07.2023

04. ಉತ್ತರಿಸುವ ಸಚಿವರು : ಮಾನ್ಯ ಗೃಹ ಸಚಿವರು

<table>
<tr><th>ಕ್ರಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಅದರಲ್ಲೂ ವಿಶೇಷವಾಗಿ ಬೆಂಗಳೂರಿನಲ್ಲಿ ವಿದ್ಯಾಭ್ಯಾಸಕ್ಕಾಗಿ ಅಥವಾ ಇನ್ನಿತರೆ ಉದ್ದೇಶಗಳಿಗಾಗಿ ವಿದೇಶಗಳಿಂದ ಬಂದಿರುವ ವಿದೇಶಿಯರು ಅವರ ವೀಸಾ ಅವಧಿ ಮುಗಿದಿದ್ದರೂ ಸಹ ಅನಧಿಕೃತವಾಗಿ ನೆಲೆಸಿ ಸ್ಥಳೀಯ ಕಾನೂನನ್ನು ಉಲ್ಲಂಘಿಸಿ ಶಾಂತಿ ಸುವ್ಯವಸ್ಥೆಗೆ ಭಂಗತಂದು ಗಲಭೆಗಳನ್ನು ಸೃಷ್ಟಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ವೀಸಾ ಅವಧಿ ಮುಗಿದಿದ್ದರೂ ಸಹ ಅನಧಿಕೃತವಾಗಿ ರಾಜ್ಯದಲ್ಲಿ ನೆಲೆಸಿರುವ ವಿದೇಶಿಗರ ಮೇಲೆ ಸರ್ಕಾರವು ಕಳೆದ 3 ವರ್ಷಗಳಲ್ಲಿ ಕೈಗೊಂಡ ಕ್ರಮಗಳೇನು; (ಮಾಹಿತಿ ನೀಡುವುದು)</td><td>ವಿದೇಶಗಳಿಂದ ಬೆಂಗಳೂರಿಗೆ ವಿದ್ಯಾಭ್ಯಾಸಕ್ಕಾಗಿ ಅಥವಾ ಇನ್ನಿತರೆ ಉದ್ದೇಶಗಳಿಗಾಗಿ ಬಂದಿರುವ ವಿದೇಶಿಯರ ಮೇಲೆ ಸರ್ಕಾರ ನಿಗಾ ಇಟ್ಟಿದ್ದು ಶಾಂತಿ ಸುವ್ಯವಸ್ಥೆಗೆ ಭಂಗಬರದಂತೆ ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳಲಾಗುತ್ತಿದೆ. ಎಫ್.ಆರ್.ಆರ್.ಓ ಅಧಿಕಾರಿಗಳು ನೀಡಿರುವ ಮಾಹಿತಿಯ ಪ್ರಕಾರ 2023ರ ಮೇ ಅಂತ್ಯಕ್ಕೆ ಬೆಂಗಳೂರು ನಗರದಲ್ಲಿ ಅವಧಿ ಮುಗಿದಿದ್ದರೂ ಅನಧಿಕೃತವಾಗಿ 678 ಜನ ನೆಲೆಸಿರುವುದಾಗಿ ತಿಳಿದುಬಂದಿರುತ್ತದೆ.<br><br>ಕಳೆದ ಮೂರು ವರ್ಷಗಳ ಅಂತ್ಯಕ್ಕೆ ಬೆಂಗಳೂರು ನಗರದಲ್ಲಿ ಅವಧಿ ಮುಗಿದಿದ್ದರೂ ಸಹ ಅನಧಿಕೃತವಾಗಿ ನೆಲೆಸಿರುವ ವಿದೇಶಿಯರ ಮೇಲೆ ದಾಖಲಾಗಿರುವ ಪ್ರಕರಣಗಳ ಅಂಕಿ-ಅಂಶಗಳ ಮಾಹಿತಿಯು ಈ ಕೆಳಕಂಡಂತಿದೆ.<br><br><table><tr><th>ಕ್ರಸಂ</th><th>ವರ್ಷವಾರು</th><th>ಅನಧಿಕೃತವಾಗಿ ನೆಲೆಸಿರುವ ವಿದೇಶಿಯರ ಮೇಲೆ ದಾಖಲಾಗಿರುವ ಪ್ರಕರಣಗಳ ಅಂಕಿ ಅಂಶಗಳ ವಿವರ</th><th>ಗಡಿಪಾರು ಮಾಡಲಾದ ವಿದೇಶಿ ಪ್ರಜೆಗಳ ಸಂಖ್ಯೆ</th></tr><tr><td>1</td><td>2021</td><td>121</td><td>56</td></tr><tr><td>2</td><td>2022</td><td>104</td><td>41</td></tr><tr><td>3</td><td>2023</td><td>15</td><td>08</td></tr></table></td></tr>
<tr><td>ಆ)</td><td>ಬೆಂಗಳೂರಿನಲ್ಲಿ ಡ್ರಗ್ಸ್ ಮತ್ತು ಮಾದಕ ದ್ರವ್ಯಗಳ ಜಾಲ ಬಹುದೊಡ್ಡದಾಗಿ ಹರಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಡ್ರಗ್ಸ್ ಮತ್ತು ಮಾದಕ ದ್ರವ್ಯಗಳ</td><td>ಸರ್ಕಾರದ ಗಮನಕ್ಕೆ ಬಂದಿದ್ದು, ಡ್ರಗ್ಸ್ ಜಾಲವನ್ನು ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ:<br><br>➢ ಸಾರ್ವಜನಿಕರ ಅನುಕೂಲಕ್ಕಾಗಿ ಮಾದಕ ವಸ್ತು ಮಾರಾಟ ಮತ್ತು ಸೇವನೆ ಮಾಡುವವರ ವಿರುದ್ಧ ದೂರು ನೀಡಲು ಟೋಲ್ ಫ್ರೀ ಸಂಖ್ಯೆ:1908 ದೂರವಾಣಿಯ ಮುಖಾಂತರ ಸಂಪರ್ಕಿಸಿ ಮಾಹಿತಿ ನೀಡುವ ಯೋಜನೆಯನ್ನು ಪ್ರಾರಂಭಿಸಲಾಗಿದೆ.</td></tr>
</table>

| | | |
|---|---|---|
| | ಹಾವಳಿಯನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮಗಳೇನು; | ➤ ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಮಾದಕ ವಸ್ತುಗಳ ಜಾಗೃತಿ ಕಾರ್ಯಾಗಾರ ನಡೆಸಿ, ಉಪನ್ಯಾಸ, ದೃಶ್ಯರೂಪಕಗಳ ಮೂಲಕ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಶಾಲಾ ಕಾಲೇಜುಗಳ ಹತ್ತಿರ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಮಾದಕ ವಸ್ತುಗಳನ್ನು ಮಾರಾಟ ಮಾಡುತ್ತಿರುವ ಹಾಗೂ ಮಾದಕ ವಸ್ತು ಸೇವನೆ ಮಾಡುವವರ ವಿರುದ್ಧ ತ್ವರಿತವಾಗಿ ಕಠಿಣ ಕ್ರಮ ಕೈಗೊಳ್ಳಲಾಗಿದೆ.<br><br>➤ ಸಾರ್ವಜನಿಕ ಸ್ಥಳಗಳು, ಜನಸಂದಣಿ ಪ್ರದೇಶಗಳು ಹಾಗೂ ಪ್ರಮುಖ ವ್ಯಕ್ತಿಗಳು ವಾಸಿಸುತ್ತಿರುವ ಪ್ರದೇಶಗಳು ಮತ್ತು ಕೊಳಚೆ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವುದರ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಲು ಹಾಗೂ ಸಾರ್ವಜನಿಕರಲ್ಲಿ ಮಾದಕ ವಸ್ತುಗಳ ಸೇವನೆ ವಿರುದ್ಧ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಅಲ್ಲದೆ ಠಾಣಾ ಸರಹದ್ದಿನ ಬೀಟ್ ಮತ್ತು ಸಬ್-ಬೀಟ್‌ಗಳಲ್ಲಿ ಆಗ್ಗಿಂದಾಗ್ಗೆ ಸಭೆಯನ್ನು ನಡೆಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ನಡೆಸಲಾಗಿದೆ.<br><br>➤ ಒಂದು ಬಾರಿಗಿಂತ ಹೆಚ್ಚು ಬಾರಿ ಎನ್.ಡಿ.ಪಿ.ಎಸ್. ಪ್ರಕರಣಗಳಲ್ಲಿ ಭಾಗಿಯಾದ ಅಥವಾ ಹವ್ಯಾಸಿ ಆರೋಪಿತರಿಗೆ PIT-NDPS ಕಾಯ್ದೆ ಅಡಿಯಲ್ಲಿ ಕ್ರಮ ಜರುಗಿಸಲಾಗುತ್ತಿದೆ.<br><br>➤ ನಗರಕ್ಕೆ ಮಾದಕ ವಸ್ತುಗಳು (ಗಾಂಜಾ) ಸರಬರಾಜು ಆಗುವ ಮಾರ್ಗಗಳ ಮೇಲೆ ತೀವ್ರ ನಿಗಾವಣೆ ಇಟ್ಟು ಕಟ್ಟುನಿಟ್ಟಾದ ಕಾನೂನು ಕ್ರಮಗಳನ್ನು ಜರುಗಿಸಲಾಗುತ್ತಿದೆ. ಬಿಟ್‌ಕಾಯಿನ್ ಬಳಸಿ ಡಾರ್ಕ್‌ನೆಟ್ (Darknet) ಮುಖಾಂತರ ಡ್ರಗ್ಸ್ ಸರಬರಾಜು ಮಾಡುತ್ತಿದ್ದ ಜಾಲವನ್ನು ಪತ್ತೆ ಮಾಡಿ ಕಾನೂನು ಕ್ರಮ ಕೈಗೊಳ್ಳಲಾಗಿರುತ್ತದೆ. ಅಲ್ಲದೆ ವಿದೇಶಗಳಿಂದ ಪೋಸ್ಟಲ್/ಕೊರಿಯರ್ಸ್ ಮುಖಾಂತರ ನಗರಕ್ಕೆ ಡ್ರಗ್ಸ್ ಸರಬರಾಜು ಮಾಡುತ್ತಿದ್ದ ಜಾಲವನ್ನು ಸಹ ಭೇದಿಸಲಾಗಿದೆ.<br><br>➤ ನಗರದಲ್ಲಿ ಡ್ರಗ್ಸ್ ಅಕ್ರಮಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ಸಲುವಾಗಿ NCB, DRI, Customs, Railway, ಶಿಕ್ಷಣ ಇಲಾಖೆಯ ಅಧಿಕಾರಿಗಳ ಸಮನ್ವಯ ಸಭೆಯನ್ನು ನಡೆಸಲಾಗಿದೆ.<br><br>➤ ಮಾದಕ ವಸ್ತುಗಳ ಮಾರಾಟ/ಸೇವನೆಯ ಪ್ರಕರಣಗಳಲ್ಲಿ ಆರೋಪಿಗಳಿಗೆ ಯಾವ ಮೂಲಗಳಿಂದ ಮಾದಕ ವಸ್ತುಗಳು ಸರಬರಾಜು ಆಗುತ್ತಿವೆ ಎಂಬುವುದರ ಬಗ್ಗೆ ಸಂಪೂರ್ಣ ಮಾಹಿತಿ ಸಂಗ್ರಹಿಸಿ, ಇಂತಹ ಕೃತ್ಯಗಳಲ್ಲಿ ತೊಡಗಿರುವ ವಿದೇಶಿಯರನ್ನು ದಸ್ತಗಿರಿ ಮಾಡಿ ಅವರುಗಳ ಪಾಸ್‌ಪೋರ್ಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡು ಸದರಿಯವರ ಗಡಿಪಾರಿಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಅಂತಹವರ ವಿರುದ್ಧ ವಿಶೇಷ |

| | | |
|---|---|---|
| | | ಕಾರ್ಯಾಚರಣೆಗಳನ್ನು ನಡೆಸಿ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ.<br><br>➢ ಯುವಕರು ಹೆಚ್ಚಾಗಿ ಸೇರುವ ಸ್ಥಳಗಳಾದ ಬಾರ್ ಮತ್ತು ರೆಸ್ಟೋರೆಂಟ್, ಕಾಫಿ-ಡೇ, ಪಬ್, ಡ್ಯಾನ್ಸ್‌ಬಾರ್, ಶಾಲಾ ಕಾಲೇಜು ಆವರಣ, ಬಸ್ ನಿಲ್ದಾಣ ಹಾಗೂ ಇನ್ನಿತರೆ ಪ್ರದೇಶಗಳಲ್ಲಿ ಮಾದಕದ್ರವ್ಯ ವಸ್ತುಗಳನ್ನು ಮಾರಾಟ ಮಾಡುತ್ತಿರುವ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಕಾನೂನಿನ ರೀತಿ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುತ್ತಿದೆ. ಸಾರ್ವಜನಿಕರ ಗಮನ ಸೆಳೆಯಲು ಬ್ಯಾನರ್, ಪೋಸ್ಟರ್‌ಗಳನ್ನು ಜನಸಂದಣಿ ಇರುವ ಸ್ಥಳಗಳಲ್ಲಿ ಪ್ರದರ್ಶಿಸಿ ಕರಪತ್ರ ಹಂಚಲಾಗುತ್ತಿದೆ, ಜೊತೆಗೆ ಕಿರುಚಿತ್ರಗಳ ಮೂಲಕ ಅರಿವು ಮೂಡಿಸುವ ಕಾರ್ಯ ಮಾಡಲಾಗುತ್ತಿದೆ.<br><br>➢ ಮಾದಕ ವಸ್ತುಗಳನ್ನು ಬೆಳೆಯುವ ಪ್ರದೇಶ ಮತ್ತು ಸಿಂಥೆಟಿಕ್ ಡ್ರಗ್ಸ್‌ಗಳನ್ನು ತಯಾರಿಸುವ ಲ್ಯಾಬ್‌ಗಳ ಹಾಗೂ ಸಂಗ್ರಹಿಸಿಟ್ಟಿದ್ದ ಸಂಗ್ರಹಗಾರಗಳ ಮೇಲೆ ದಾಳಿ ಮಾಡಿ ಸಂಬಂಧಪಟ್ಟವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗಿದೆ.<br><br>➢ ಬೆಂಗಳೂರು ನಗರದಲ್ಲಿ ಮಾದಕ ವಸ್ತುಗಳ ಅಕ್ರಮ ಸಾಗಾಣಿಕೆ ಮತ್ತು ಮಾರಾಟ ತಡೆಗಟ್ಟುವ ಸಲುವಾಗಿ ಆರೋಪಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮಗಳನ್ನು ಅನುಸರಿಸಿ **NDPS Chapter–V** ರಡಿಯಲ್ಲಿ ಇಬ್ಬರು ಡ್ರಗ್ಸ್ ಪೆಡ್ಲರ್‌ಗಳ ಸ್ಥಿರಾಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ.<br><br>➢ ದಿನಾಂಕ 26.06.2023 ರಂದು ವಿಶ್ವ ಮಾದಕ ವಸ್ತುಗಳ ಸೇವನೆ ಮತ್ತು ಕಳ್ಳಸಾಗಾಣಿಕೆ ವಿರೋಧಿ ದಿನ ಅಂಗವಾಗಿ ಬೆಂಗಳೂರು ನಗರದ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯ ಎಲ್ಲಾ ದರ್ಜೆಯ ಪೊಲೀಸ್ ಅಧಿಕಾರಿಗಳು ಅಂದರೆ ನಗರ ಪೊಲೀಸ್ ಆಯುಕ್ತರಿಂದ ಪೊಲೀಸ್ ಉಪ ನಿರೀಕ್ಷಕರನ್ನು ಒಳಗೊಂಡಂತೆ, ಒಟ್ಟು 618 ಅಧಿಕಾರಿಗಳು, 388 ಶಾಲೆ, 253 ಕಾಲೇಜು ಹಾಗೂ 51 ವೃತ್ತಿನಿರತ ಕಾಲೇಜುಗಳಿಗೆ ಭೇಟಿ ನೀಡಿ, ಸುಮಾರು 1,95,000 ವಿದ್ಯಾರ್ಥಿಗಳಿಗೆ ಮಾದಕ ವಸ್ತು ದ್ರವ್ಯಗಳ ಸೇವನೆಯಿಂದ ಆಗುವ ಹಾನಿ ಹಾಗೂ ಎನ್.ಡಿ.ಪಿ.ಎಸ್ ಕಾಯ್ದೆ ಬಗ್ಗೆ ಅರಿವು ಮೂಡಿಸಲಾಗಿದೆ.<br><br>➢ ಬೆಂಗಳೂರು ನಗರ ಪೊಲೀಸರು ಮಾದಕ ವಸ್ತುಗಳ ಮಾರಾಟಗಾರರ ವಿರುದ್ಧ ಸಮರ ಸಾರಿದ್ದು, ಹವ್ಯಾಸಿ ಮಾದಕ ವಸ್ತುಗಳ ಮಾರಾಟಗಾರರ ಬಗ್ಗೆ ಕ್ರೋಢೀಕರಿಸಿದ ಮಾಹಿತಿಯನ್ನೊಳಗೊಂಡ ಒಂದು ದತ್ತಾಂಶ ಸಂಗ್ರಹಣೆಯ (Database) ತಂತ್ರಾಂಶವನ್ನು ಅಭಿವೃದ್ಧಿಪಡಿಸಿದ್ದು, ಈ ದತ್ತಾಂಶ ಸಂಗ್ರಹಣೆ (Database) ಯಿಂದ ಬೆಂಗಳೂರು ನಗರದ ಪೊಲೀಸರಿಗೆ ಅವಶ್ಯಕವಾದ ಮಾದಕ ವಸ್ತುಗಳ ಮಾರಾಟಗಾರರ ಮತ್ತು ಸೇವನೆ ಮಾಡುವವರ ಮಾಹಿತಿ ಶೀಘ್ರವಾಗಿ ದೊರಕುವಂತಾಗಿದೆ. |

<table>
<tr><td></td><td></td><td>ಬೆಂಗಳೂರು ನಗರ ಪೊಲೀಸರು ವಿದ್ಯಾಸಂಸ್ಥೆಗಳ ಬಳಿ ಮಾದಕ ವಸ್ತು ಪದಾರ್ಥಗಳ ಮಾರಾಟ / ಸೇವನೆ ಮಾಡುತ್ತಿದ್ದವರ ವಿರುದ್ದ ನಿರಂತರ ವಿಶೇಷ ಕಾರ್ಯಾಚರಣೆ ನಡೆಸಿ ಮಾರಾಟ ಮಾಡುತ್ತಿದ್ದವರು ಮತ್ತು ಸೇವನೆ ಮಾಡಿದವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗಿದೆ.</td></tr>
<tr><td>ಇ)</td><td>ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರಿನಲ್ಲಿ ಎಷ್ಟು ಡ್ರಗ್ಸ್ ಮತ್ತು ಮಾದಕ ದ್ರವ್ಯಗಳ ಮಾರಾಟಗಾರರನ್ನು ಬಂಧಿಸಲಾಗಿದೆ; ಮತ್ತು ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ? (ವಿವರ ನೀಡುವುದು)</td><td>ಬೆಂಗಳೂರು ನಗರದ ಪೊಲೀಸ್ ಠಾಣೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಮಾದಕ ವಸ್ತುಗಳ ಮಾರಾಟಗಾರರ ವಿರುದ್ಧ ದಾಖಲಿಸಿರುವ ಪ್ರಕರಣಗಳು ಹಾಗೂ ಬಂಧಿಸಿರುವ ಆರೋಪಿಗಳ ವರ್ಷಾವಾರು ಅಂಕಿ ಅಂಶಗಳನ್ನು ಈ ಕೆಳಕಂಡಂತೆ ವಿವರಿಸಲಾಗಿದೆ.
<table>
<tr><th>ಕ್ರ.ಸಂ</th><th>ವರ್ಷಾವಾರು</th><th>ಮಾದಕದ್ರವ್ಯ ಮಾರಾಟಗಾರರ ವಿರುದ್ಧ ದಾಖಲಿಸಿರುವ ಪ್ರಕರಣಗಳ ಸಂಖ್ಯೆ</th><th>ಬಂಧಿಸಿರುವ ಆರೋಪಿಗಳ ಸಂಖ್ಯೆ</th></tr>
<tr><td>1</td><td>2020</td><td>460</td><td>839</td></tr>
<tr><td>2</td><td>2021</td><td>696</td><td>1184</td></tr>
<tr><td>3</td><td>2022</td><td>579</td><td>977</td></tr>
<tr><td>4</td><td>2023</td><td>373</td><td>528</td></tr>
</table>
</td></tr>
</table>

ಸಂಖ್ಯೆ: ಒಇ 302 ಪಿಎಂಎಸ್ 2023

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು